ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಮತ್ತು ಖಾಲಿ ಇರುವ ಹುದ್ದೆಗಳನ್ನು ಸಂಯುಕ್ತ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ತುಂಬಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ.

ಸೂಳ್ಯ ವಿಧಾನ ಸಭಾ ವ್ಯಾಪ್ತಿಯಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಹುದ್ದೆಗಳ ಭರ್ತಿ

3501(4069) ಶ್ರೀ ಅಂಗಾರ ಎಸ್ (ಸೂಳ್ಯ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಕಿರಿಯ, ಹಿರಿಯ ಪ್ರಾಥಮಿಕ ಶಾಲೆಗಳಿವೆ; ಸದರಿ ಶಾಲೆಗಳಿಗೆ ಮಂಜೂರಾದ ಹುದ್ದೆ ಎಷ್ಟು; ಹಾಲಿ ಖಾಲಿಯಿರುವ ಹುದ್ದೆಗಳು ಎಷ್ಟು; ವಿವರ ನೀಡುವುದು:

ಆ) ಸದರಿ ಖಾಲಿಯಿರುವ ಅಧ್ಯಾಪಕರ ಹುದ್ದೆಯನ್ನು ಭರ್ತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ ಎಷ್ಟು ಸಮಯದಲ್ಲಿ ಭರ್ತಿ ಮಾಡಲಾಗುವುದು?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ಸೂಳ್ಯ ವಿಧಾನ ಸಭಾ ಕ್ಷೇತ್ರದಲ್ಲಿ

1. 66 ಕಿರಿಯ ಪ್ರಾಥಮಿಕ ಶಾಲೆ ಮಂಜೂರು ಆಗಿದೆ.
   74 ಕಿರಿಯ ಪ್ರಾಥಮಿಕ ಶಾಲೆ ಮಂಜೂರು ಆಗಿದೆ
2. ಕಿರಿಯ ಪ್ರಾಥಮಿಕ ಶಾಲೆಗೆ 74 ಹುದ್ದೆ ಮಂಜೂರು ಆಗಿದೆ.
   ಹಿರಿಯ ಪ್ರಾಥಮಿಕ ಶಾಲೆಗೆ 517 ಹುದ್ದೆ ಮಂಜೂರಾಗಿದೆ
3. ಕಿರಿಯ ಪ್ರಾಥಮಿಕ ಶಾಲೆಯಲ್ಲಿ 26 ಹುದ್ದೆಗಳು ಖಾಲಿ ಇರುತ್ತವೆ.
   ಹಿರಿಯ ಪ್ರಾಥಮಿಕ ಶಾಲೆಯಲ್ಲಿ 25 ಹುದ್ದೆಗಳು ಖಾಲಿ ಇವೆ. ಒಟ್ಟು 51 ಹುದ್ದೆಗಳು ಖಾಲಿ ಇರುತ್ತವೆ.

ಆ) ಸಾಧ್ಯವಾದಷ್ಟು ಜಾಗ್ರತೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಸೂಳ್ಯ ತಾಲ್ಲೂಕಿನ ಡಾ॥ ಶಿವರಾಮ ಕಾರಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅನುದಾನ

3502(4070) ಶ್ರೀ ಅಂಗಾರ ಎಸ್. (ಸೂಳ್ಯ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನ ಬೆಳ್ಳಾರೆಯ ಡಾ: ಶಿವರಾಮ ಕಾರಂತ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಯಾವಾಗ ಮಂಜೂರು ಮಾಡಲಾಯಿತು;

ಆ) ಸದರಿ ಕಾಲೇಜು ಕಟ್ಟಡದ ಅಂದಾಜು ವೆಚ್ಚ ಮತ್ತು ಎಷ್ಟು ಅನುದಾನವನ್ನು ಒದಗಿಸಲಾಗಿದೆ; ಕಳೆದ ಮೂರು ವರ್ಷಗಳಿಂದ ವರ್ಷವಾರು ಅನುದಾನವನ್ನು ನೀಡಿದ ವಿವರವನ್ನು ನೀಡುವುದು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) 1991ನೇ ಸಾಲಿನಲ್ಲಿ ಮಂಜೂರು ಮಾಡಲಾಯಿತು.